# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ-164//2021-22 ದಿನಾಂಕ: 28-02-2022

### ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 25-02-2022 ಗುರುವಾರ ವಾರ್ಡ್ ಸಂಖ್ಯೆ: 164, ವಿದ್ಯಾಪೀಠದ ವಾರ್ಡ್ ಕಛೇರಿಯಲ್ಲಿ ನಡೆದ ಫೆಬ್ರವರಿ ತಿಂಗಳ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಬೆಳಿಗ್ಗೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ಕೆ.ಎನ್. ರಾಜೇಶ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಿರಿನಗರ ಉಪವಿಭಾಗ ಹಾಗೂ ಪ್ರಭಾರ ಘನತ್ಯಾಜ್ಯ ನಿರ್ವಹಣೆ |
| 3 | ಶ್ರೀ ಕೃಷ್ಣಮೂರ್ತಿ.ಟಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-164, ವಿದ್ಯಾಪೀಠ |
| 4 | ಡಾ॥ ಸುರ್ಜಿತ್ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 5 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 6 | ಎಂ. ಸುರೇಶ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 164 |
| 7 | ಶ್ರೀ ಆರ್. ರಂಗಸ್ವಾಮಿ | ಕಿರಿಯ ಅಭಿಯಂತರರು, ಎಸ್-15 (ಬೆಸ್ಕಾಂ) |
| 8 | ಶ್ರೀಮತಿ ದಿವ್ಯಾ .ಡಿ | ಪರಿವೀಕ್ಷಕರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 9 | ಶ್ರೀ ಮುನಿರಾಜು | ಸಹಾಯಕ ಅಭಿಯಂತರರು ಡಬ್ಲ್ಯೂ-08 (ಬೆಸ್ಕಾಂ) |
| 10 | ಶ್ರೀ ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 11 | ಶ್ರೀ ಮಹೇಶ್ .ಬಿ | ಮಾರ್ಷಲ್ |
| 12 | ಶ್ರೀ ಯತಿರಾಜ್ | ವಾರ್ಡ್ ಘ.ತ್ಯಾ ನಿ ಸೂಪರ್‌ವೈಸರ್ |
| 13 | ಶ್ರೀ ತಿರುಮಲಯ್ಯ | ವಾರ್ಡ್ ಘ.ತ್ಯಾ ನಿ ಸೂಪರ್‌ವೈಸರ್ |
| 14 | ಶ್ರೀ ಕುಮಾರ್ | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಹಿಂದಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ತ್ಯಾಜ್ಯ ಸಂಗ್ರಹಣೆಯು ಸಮರ್ಪಕವಾಗಿ ನಿರ್ವಹಿಸುತ್ತಿದ್ದು ಹಸಿ ಮತ್ತು ಒಣ ಕಸವನ್ನು ಮನೆಗಳಿಂದ ಸೂಕ್ತ ರೀತಿಯಲ್ಲಿ ಸಂಗ್ರಹಿಸಿ ನಿರ್ವಹಿಸಲಾಗುತ್ತಿರುತ್ತದೆ ಎಂದು ಸಹಾಯಕ ಕಾರ್ಯಪಾಲಕ ಅಭಿಯಂತರರು ವರದಿ ನೀಡಿರುತ್ತಾರೆ. 2021-22ನೇ ಸಾಲಿನಲ್ಲಿ ಘನತ್ಯಾಜ್ಯ ನಿರ್ವಹಣಾ ವಿಭಾಗಕ್ಕೆ ನಿಗಧಿಪಡಿಸಲಾಗಿರುವ ಅನುದಾನ ಮತ್ತು ಖರ್ಚಾದ ವೆಚ್ಚದ ವಿವರವನ್ನು ಮುಂದಿನ ಸಭೆಯಲ್ಲಿ ಹಾಜರುಪಡಿಸಲು ಅಧ್ಯಕ್ಷರು ಸೂಚಿಸಿದ ಮೇರೆಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಸಂಬಂಧಿಸಿದ ದಾಖಲಾತಿಗಳನ್ನು ನೀಡುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಪ್ರಕರಣಗಳು ತಹಬಂದಿಗೆ ಬಂದ ನಂತರ ಪೌರಕಾರ್ಮಿಕರ ಹಾಜರಾತಿಯನ್ನು ಬಯೋಮೆಟ್ರಿಕ್‌ನಲ್ಲಿ ಪಡೆಯುವುದಾಗಿ ಸಭೆಗೆ ತಿಳಿಸಿರುತ್ತಾರೆ.

2. ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) ರವರು ಸಭೆಯಲ್ಲಿ ಹಾಜರಿದ್ದು, ಆರೋಗ್ಯ ಕೇಂದ್ರದಲ್ಲಿ ಜನವರಿ-2022ರ ಮಾಹೆಯಲ್ಲಿ ಸರಿಸುಮಾರು 100 ಬೂಸ್ಟರ್ ಲಸಿಕೆಯನ್ನು ಹಾಕಲಾಗುತ್ತಿದ್ದು, 1ನೇ ಮತ್ತು 2ನೇ ಡೋಸ್ ಪ್ರತಿದಿನವೂ ಸರಿಸುಮಾರು 150 ಜನರಿಗೆ ಹಾಕಲಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ. ಜನವರಿ-2022ರ ಮಾಹೆಯಲ್ಲಿ 2700 ಕೋವಿಡ್ ಪರೀಕ್ಷೆಯನ್ನು ನಡೆಸಲಾಗಿದ್ದು, ಅದರಲ್ಲಿ 375ಕ್ಕೂ ಹೆಚ್ಚು ಕೋವಿಡ್ ಪಾಸಿಟಿವ್ ಕೇಸ್‌ಗಳು ವರದಿಯಾಗಿರುತ್ತದೆ ಎಂದು ತಿಳಿಸಿರುತ್ತಾರೆ ಹಾಗೂ ಯಾವುದೇ ಓಮಿಕ್ರೋನ್ ಪ್ರಕರಣಗಳು ವರದಿಯಾಗಿರುವುದಿಲ್ಲ ಎಂದು ಕೋವಿಡ್ ಸೋಂಕಿತರಲ್ಲಿ ಒಬ್ಬರು ಮರಣ ಹೊಂದಿರುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ವೈದ್ಯಾಧಿಕಾರಿಗಳಿಗೆ ತಿಳಿಸಿರುತ್ತಾರೆ. ಚಿಕ್ಕಮಕ್ಕಳ ಲಸಿಕಾಕರಣವನ್ನು ವಾರದಲ್ಲಿ ಪ್ರತಿ ಮಂಗಳವಾರ ಮತ್ತು ಗುರುವಾರದಂದು ನೀಡಲಾಗುತ್ತಿರುತ್ತದೆ ಹಾಗೂ 15 ರಿಂದ 18 ವರ್ಷದ ಪ್ರಾಯದವರಿಗೆ ಕೋವಿಡ್ ಲಸಿಕೆಯನ್ನು ಆರೋಗ್ಯ ಕೇಂದ್ರದಲ್ಲಿ ಪ್ರತಿ ಶನಿವಾರ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿನ 13 ಶಾಲಾ-ಕಾಲೇಜುಗಳಲ್ಲಿ ಪ್ರತಿ ದಿನವೂ ನೀಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ.

3. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಪರಿವೀಕ್ಷಕರು ಹಾಜರಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ನೀರು ಸರಬರಾಜು & ಒಳಚರಂಡಿ ವ್ಯವಸ್ಥೆಯನ್ನು ಸೂಕ್ತ ರೀತಿಯಲ್ಲಿ ನಿರ್ವಹಿಸಲಾಗುತ್ತಿರುತ್ತದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ. ದುರಸ್ಥಿ ಕಾಮಗಾರಿಗಳನ್ನು ಕೈಗೆತ್ತಿ ಕೊಂಡು ಮುಗಿದ ತಕ್ಷಣವೇ ಅಗೆದ ಭಾಗಗಳನ್ನು ಪುನರ್‌ನಿರ್ಮಾಣ ಮಾಡುವುದು ಮತ್ತು ಸೂಕ್ತ ರೀತಿಯಲ್ಲಿ ನಿರ್ವಹಿಸಲು ಅಧಿಕಾರಿಗಳಿಗೆ ತಿಳಿಸಲಾಗಿದ್ದು, ತಪ್ಪಿದ್ದಲ್ಲಿ ದಂಡ ಸಹಿತ ಪೋಲೀಸ್ ಠಾಣೆಯಲ್ಲಿ ದೂರು ದಾಖಲಿಸುವುದಾಗಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಅಧ್ಯಕ್ಷರು ಸೂಚಿಸಿರುತ್ತಾರೆ.

4. ಸಭೆಯಲ್ಲಿ ಹಾಜರಿದ್ದ ಕಂದಾಯ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಮತದಾರರ ನೋಂದಣಿ ಅಭಿಯಾನದ ಹಮ್ಮಿಕೊಂಡಿದ್ದು, ಅಭಿಯಾನದಲ್ಲಿ ಹೊಸದಾಗಿ ಸೇರ್ಪಡೆಗೊಳಿಸಲು ಅರ್ಜಿಗಳನ್ನು ಸ್ವೀಕರಿಸಲಾಗುತ್ತದೆ ಹಾಗೂ ಹಾಲಿ ಇರುವ ಮತದಾರರ ವರ್ಗಾವಣೆ ಮತ್ತು ಮರಣ ಹೊಂದಿರುವ ಮತದಾರರನ್ನು ಪಟ್ಟಿಯಿಂದ ತೆಗೆಯುವ ಕಾರ್ಯ ಮಾಡಲಾಗುತ್ತದೆ ಎಂದು ಸಭೆಯಲ್ಲಿ ಕಂದಾಯ ಅಧಿಕಾರಿಗಳು ವರದಿ ನೀಡಿರುತ್ತಾರೆ ಕೋವಿಡ್‌ನಿಂದಾಗಿ ಮರಣ ಹೊಂದಿದ ಸಂಬಂಧಿಕರಿಗೆ ನೀಡಿರುವ ಪರಿಹಾರ ಮೊತ್ತದ ವಿವರವನ್ನು ನೀಡಲು ಅಧಿಕಾರಿಗಳಿಗೆ ಸೂಚಿಸಲಾಯಿತು. ಮುಂದುವರೆದು ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಈವರೆವಿಗೂ ಕಂದಾಯ ವಸೂಲಿ ಆಗಿರುವ ವರದಿಯನ್ನು ನೀಡಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ತಿಳಿಸಿರುತ್ತಾರೆ.

5. ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಟ್ರಾನ್ಸ್‌ಫಾರ್ಮರ್‌ಗಳು ಹಾಳಾಗಿರುವ ಬಗ್ಗೆ ಯಾವುದೇ ದೂರು ಬಂದಿರುವುದಿಲ್ಲ ಎಂದು ತಿಳಿಸಿರುತ್ತಾರೆ. ಹಾಗೂ ಅಂರ್ಜಾಲ ಕೇಬಲ್ ಅಳವಡಿಸಲು ಅನುಮತಿಗಾಗಿ ಪತ್ರ ಬರೆದಿರುವುದಾಗಿ ಸಭೆಗೆ ತಿಳಿಸಿರುತ್ತಾರೆ. ಮುಂದುವರೆದು ವಾರ್ಡ್ ವ್ಯಾಪ್ತಿಯಲ್ಲಿ 25 ವರ್ಷಗಳಷ್ಟು ಹಳೆಯದಾದ ಕೇಬಲ್‌ಗಳನ್ನು ಬದಲಾವಣೆ ಮಾಡುತ್ತಿದ್ದು, ಶೇ 50% ರಷ್ಟು ಕೆಲಸ ಮುಗಿದಿರುತ್ತದೆ. ಉಳಿಕೆ ಶೇ 50% ರಷ್ಟು ಕೇಬಲ್ ಬದಲಾವಣೆ ಕಾಮಗಾರಿಯ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಮುಂದುವರೆದು ಅಧ್ಯಕ್ಷರು ಸಾರ್ವಜನಿಕರ ಕಟ್ಟಡಗಳ ಬಾಕಿ ಇರುವ ಬಿಲ್ಲಿವ ವಿವರವನ್ನು ನೀಡಲು ಸಭೆಗೆ ಹಾಜರಿದ್ದ ಶ್ರೀ ಮುನಿರಾಜು ಬೆಸ್ಕಾಂ ಅಧಿಕಾರಿ ರವರಿಗೆ ತಿಳಿಸಿರುತ್ತಾರೆ.

6. ವಾರ್ಡ್ ವ್ಯಾಪ್ತಿಯಲ್ಲಿ ಹೊಸದಾಗಿ ಗುರ್ತಿಸಲಾದ ರಸ್ತೆ ಗುಂಡಿಗಳನ್ನು ಜಲಮಂಡಳಿ ಹಾಗೂ ಬೆಸ್ಕಾಂ ಹಾಗೂ ಇನ್ನಿತರ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳಿಂದ ಪರಿವೀಕ್ಷಣೆ ಮಾಡಿದ ನಂತರ ರಸ್ತೆ ಗುಂಡಿಗಳನ್ನು ಮುಚ್ಚಲು ಅಗತ್ಯ ಕ್ರಮಗಳನ್ನು ತುರ್ತಾಗಿ ಕೈಗೊಳ್ಳುವಂತೆ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿರುತ್ತಾರೆ. ಈ ಬಗ್ಗೆ ವಾರ್ಡ್ ಅಭಿಯಂತರರು ರಸ್ತೆಗುಂಡಿಗಳನ್ನು ಮುಚ್ಚುವ ಕಾಮಗಾರಿಯನ್ನು ಕೈಗೊಳ್ಳಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಶೇ 70% ರಷ್ಟು ರಸ್ತೆಗುಂಡಿಗಳನ್ನು ಮುಚ್ಚಿರುತ್ತಾರೆ ಹಾಗೂ ವಾರ್ಡ್‌ನ ನಿರ್ವಹಣೆಗಾಗಿ ಕಾಮಗಾರಿ ಇಲಾಖೆಗೆ ನೀಡಲಾಗುತ್ತಿರುವ ರೂ: 60.00 ಲಕ್ಷಗಳ ಅನುದಾನದಲ್ಲಿ ಕೈಗೊಳ್ಳಬೇಕಾದ ಚರಂಡಿಗಳ ನಿರ್ವಹಣೆ, ರಸ್ತೆಗುಂಡಿಗಳ ನಿರ್ವಹಣೆ, ಬೋರ್‌ವೆಲ್‌ಗಳ ನಿರ್ವಹಣೆ, ಕಟ್ಟಡಗಳ ನಿರ್ವಹಣೆಯನ್ನು ಕೈಗೆತ್ತಿಕೊಳ್ಳುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಾರ್ವಜನಿಕರೊಂದಿಗೆ ಚರ್ಚಿಸಲಾಯಿತು. ಬಜೆಟ್ ಅನುದಾನಕ್ಕಾಗಿ ಮಾನ್ಯ ಶಾಸಕರೊಂದಿಗೆ ಚರ್ಚಿಸಲು ನೋಡಲ್ ಅಧಿಕಾರಿ ವಾರ್ಡ್ ಅಭಿಯಂತರರಿಗೆ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.